ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿ-3/ಎಸ್‌ಯು/ಮೆ.ರಜೆ/2013-14

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12,
ದಿನಾಂಕ -01-2015.
23-03-2015

## ಸುತ್ತೋಲೆ

ವಿಷಯ:- ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆಯ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:-1. ಸರ್ಕಾರದ ಆದೇಶದ ಸಂಖ್ಯೆ ಎಫ್‌ಡಿ 4 ಎಸ್‌ಆರ್‌ಎಸ್ 12 ದಿನಾಂಕ 14-06-2012.

2. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 52 ವಿವಿದ 99 ದಿನಾಂಕ 02-02-2002

*****

ಉಲ್ಲೇಖ-1ರ ಸರ್ಕಾರದ ಆದೇಶದ ದಿನಾಂಕ 14-06-2012 ರಲ್ಲಿ ಸರ್ಕಾರಿ ಮಹಿಳಾ ನೌಕರರಿಗೆ ಕೆ.ಸಿ.ಎಸ್.ಆರ್ ನಿಯಮ 135(1) ರಂತೆ 135 ದಿನಗಳ ಪ್ರಸೂತಿ ರಜೆಯನ್ನು 180 ದಿನಗಳಿಗೆ ಹೆಚ್ಚಿಸಿ ದಿನಾಂಕ 01-04-2012 ರಿಂದ ಅನ್ವಯವಾಗುವಂತೆ ಆದೇಶಿಸಿದೆ.

ಉಲ್ಲೇಖ-2ರ ಸರ್ಕಾರದ ಅಧಿಸೂಚನೆ ದಿನಾಂಕ 02-02-2000 ರಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ಸರ್ಕಾರಿ ನೌಕರರಿಗೆ ರಜೆಗಳನ್ನು ವಿಸ್ತರಿಸುವ ಸಂಬಂಧ ನಿಯಮ-26 ರಲ್ಲಿ ವಿಸ್ತರಿಸಲು ಅವಕಾಶ ಕಲ್ಪಿಸಿದೆ. ಅದರ ವಿವರಣೆ ಈ ಕೆಳಕಂಡಂತಿದೆ:

"The leave rules applicable to both teaching and non-teaching staff in Government Educational Institutions shall mutatis-mutandis be applicable to the teaching and non- teaching staff of the aided Education Institutions".

ಸರ್ಕಾರದ ಆದೇಶದ ದಿನಾಂಕ 14-06-2012 ರಲ್ಲಿ ಮಹಿಳಾ ಸರ್ಕಾರಿ ನೌಕರರಿಗೆ ಪ್ರಸೂತಿ ರಜೆಯನ್ನು 135 ದಿನಗಳಿಂದ 180 ದಿನಗಳಿಗೆ ದಿನಾಂಕ 01-04-2012 ರಿಂದ ಅನ್ವಯವಾಗುವಂತೆ ಆದೇಶಿಸಿರುವುದನ್ನು ಗಣನೆಗೆ ತೆಗೆದುಕೊಂಡು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ

..2

ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಉಲ್ಲೇಖ-2 ರಲ್ಲಿನ ಸರ್ಕಾರದ ಆದೇಶದಂತೆ ಪ್ರಸೂತಿ ರಜೆಯನ್ನು 135 ದಿನಗಳಿಂದ 180 ದಿನಗಳವರೆಗೆ ವಿಸ್ತರಿಸಿ ಆದೇಶಿಸಿದೆ. ಅದರಂತೆ ಸಂಬಂಧಪಟ್ಟ ಪ್ರಾಚಾರ್ಯರು, ಜಿಲ್ಲಾ ಉಪ ನಿರ್ದೇಶಕರು ಕ್ರಮ ವಹಿಸಲು ಸೂಚಿಸಿದೆ.

Kodbole
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

*ಪ್ರತಿಗಳು:*

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು-560 001.
2. ಆಪ್ತ ಕಾರ್ಯದರ್ಶಿಗಳು, ಮಾನ್ಯ ನಿರ್ದೇಶಕರವರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರುಗಳಿಗೆ, ಉಪ ನಿರ್ದೇಶಕರ ಮುಖಾಂತರ.
5. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳು, ಉಪ ನಿರ್ದೇಶಕರುಗಳು, ಸಹಾಯಕ ನಿರ್ದೇಶಕರುಗಳು, ಶಾಖಾಧಿಕಾರಿಗಳು, ಅಧೀಕ್ಷಕರುಗಳು ಹಾಗೂ ವಿಷಯ ನಿರ್ವಾಹಕರುಗಳಿಗೆ.
6. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು- ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು.
7. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
8. ಕಛೇರಿ ಪ್ರತಿ.